**All India Radio: Bangalore**
**National Bulletin In Kannada**
**04.03.2026 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**04.03.2026 7.35 am**
**<>><><*><><<>**
ಮುಖ್ಯಾಂಶಗಳು

೧. **ಕುವೈತ್, ಕತಾರ್ ಹಾಗೂ ಓಮನ್ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಸಂಭಾಷಣೆ; ಪಶ್ಚಿಮ ಏಷ್ಯಾ ಪರಿಸ್ಥಿತಿ ಕುರಿತು ಸಮಾಲೋಚನೆ**

೨. **ಸಿಬಿಎಸ್‌ಇ ಪಶ್ಚಿಮ ಏಷ್ಯಾ ಪ್ರದೇಶ ಮಂಡಳಿಯಿಂದ ನಾಳೆ, ನಾಡಿದ್ದು ನಡೆಯಬೇಕಿದ್ದ ೧೦, ೧೨ನೇ ತರಗತಿ ಪರೀಕ್ಷೆ ಮುಂದೂಡಿಕೆ**

೩. **ಭೌಗೋಳಿಕ ರಾಜಕೀಯ ಬೆಳವಣಿಗೆಗಳ ಪರಿಣಾಮ ನಿರ್ಣಯಿಸಲು ವಿದೇಶಿ ವ್ಯಾಪಾರ ಮಹಾ ನಿರ್ದೇಶನಾಲಯದಿಂದ ಅಂತರ-ಸಚಿವಾಲಯ ತಂಡ ರಚನೆ**

೪. **ಇಂದು ದೇಶಾದ್ಯಂತ ಹೋಳಿ ಸಂಭ್ರಮ; ಸಮಸ್ತ ಜನತೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಾಶಯ**

೫. **ಬರ್ಮಿಂಗ್ಹಾಮ್‌ನಲ್ಲಿ ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ಗೆ ಚಾಲನೆ; ಪುರುಷರ ಸಿಂಗಲ್ಸ್‌ನ ಮೊದಲ ಸುತ್ತಿನಲ್ಲಿ ಲಕ್ಷ್ಯ ಸೇನ್‌ಗೆ ಗೆಲುವು**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಕುವೈತ್‌ನ ರಾಜಕುಮಾರ ಶೇಖ್ ಸಬಾಹ್ ಅಲ್-ಖಾಲಿದ್ ಅಲ್-ಹಮದ್ ಅಲ್-ಮುಬಾರಕ್ ಅಲ್-ಸಬಾಹ್ ಅವರೊಂದಿಗೆ ದೂರವಾಣಿಯ ಮೂಲಕ ಮಾತನಾಡಿದರು. ಈ ವೇಳೆ ಅವರು, ಕುವೈತ್‌ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಉಲ್ಲಂಘನೆಯನ್ನು ಖಂಡಿಸಿದರು. ಈ ಕಷ್ಟದ ಸಮಯದಲ್ಲಿ ಭಾರತ ಕುವೈತ್ ಜನತೆಯೊಂದಿಗೆ ನಿಲ್ಲುತ್ತದೆ ಎಂದ ಅವರು, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಪುನಃಸ್ಥಾಪಿಸುವಲ್ಲಿ ಸಂವಾದ ಮತ್ತು ರಾಜತಾಂತ್ರಿಕತೆಯ ಮಹತ್ವವನ್ನು ಒತ್ತಿ ಹೇಳಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕುವೈತ್‌ನಲ್ಲಿರುವ ಭಾರತೀಯ ಸಮುದಾಯದ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ಕುವೈತ್ ನಾಯಕತ್ವದ ನಿರಂತರ ಬೆಂಬಲವನ್ನು ಪ್ರಧಾನಿ ಶ್ಲಾಘಿಸಿದರು. ಇದರ ಜೊತೆಗೆ ಪ್ರಧಾನಿ, ಕತಾರ್‌ನ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಹಾಗೂ ಒಮಾನ್‌ನ ಸುಲ್ತಾನ, ಸುಲ್ತಾನ್ ಹೈಥಮ್ ಬಿನ್ ತಾರಿಕ್ ಅವರೊಂದಿಗೆ ಮಾತನಾಡಿ, ಆ ದೇಶಗಳ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಯಾವುದೇ ಉಲ್ಲಂಘನೆಯನ್ನು ಖಂಡಿಸಿದರು. ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಶೀಘ್ರವಾಗಿ ಪುನಃಸ್ಥಾಪಿಸಲು ನಿರಂತರ ರಾಜತಾಂತ್ರಿಕ ಮಾರ್ಗಗಳು ಅತ್ಯಗತ್ಯ ಎಂದು ತಿಳಿಸಿದರು..

**<>><><*><><<>**

ನಾಳೆ ಮತ್ತು ನಾಡಿದ್ದು ನಡೆಯಬೇಕಿದ್ದ ೧೦ ಮತ್ತು ೧೨ ನೇ ತರಗತಿ ಪರೀಕ್ಷೆಗಳನ್ನು ಪಶ್ಚಿಮ ಏಷ್ಯಾ ಪ್ರದೇಶ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ- ಸಿಬಿಎಸ್‌ಇ ಮುಂದೂಡಿದೆ. ಈ ಪರೀಕ್ಷೆಗಳಿಗೆ ಪರಿಷ್ಕೃತ ದಿನಾಂಕಗಳನ್ನು ನಂತರ ಪ್ರಕಟಿಸಲಾಗುವುದು. ಮಾರ್ಚ್ ೭ ರಿಂದ ನಿಗದಿಯಾಗಿರುವ ಪರೀಕ್ಷೆಗಳ ಬಗ್ಗೆ ನಾಳೆಯೊಳಗೆ ಪರಿಸ್ಥಿತಿಯನ್ನು ಪರಿಶೀಲಿಸಿದ ನಂತರ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಮಂಡಳಿ ತಿಳಿಸಿದೆ.

**<>><><*><><<>**

ಭಾರತದ ರಫ್ತಿನ ಮೇಲೆ, ವಿಶೇಷವಾಗಿ ಪೂರೈಕೆ ಸರಪಳಿ ಅಡೆತಡೆಗಳ ಮೇಲೆ ಪ್ರಸ್ತುತ ಭೌಗೋಳಿಕ ರಾಜಕೀಯ ಬೆಳವಣಿಗೆಗಳ ಪರಿಣಾಮವನ್ನು ನಿರ್ಣಯಿಸಲು ವಿದೇಶಿ ವ್ಯಾಪಾರ ಮಹಾ ನಿರ್ದೇಶನಾಲಯ- ಡಿಜಿಎಫ್‌ಟಿ ಅಂತರ-ಸಚಿವಾಲಯ ತಂಡವನ್ನು ರಚಿಸಿದೆ. ಈ ತಂಡ, ಪೂರೈಕೆ ಸರಪಳಿಗಳ ಮೇಲೆ ಪರಿಣಾಮ ಬೀರುವ ಜಾಗತಿಕ ಬೆಳವಣಿಗೆಗಳನ್ನು ಮೇಲ್ವಿಚಾರಣೆ ಮಾಡುತ್ತದೆ, ವಲಯವಾರು ರಫ್ತು ಮತ್ತು ನಿರ್ಣಾಯಕ ಆಮದು ದುರ್ಬಲತೆಗಳನ್ನು ನಿರ್ಣಯಿಸುತ್ತದೆ, ರಫ್ತು ಉತ್ತೇಜನ ಮಂಡಳಿಗಳು ಸೇರಿದಂತೆ ಪಾಲುದಾರರೊಂದಿಗೆ ತೊಡಗಿಸಿಕೊಳ್ಳಲು, ಸಚಿವಾಲಯಗಳು ಮತ್ತು ಇಲಾಖೆಗಳ ನಡುವೆ ಸಮನ್ವಯವನ್ನು ಸುಗಮಗೊಳಿಸುತ್ತದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಇದರ ಹೊರತಾಗಿ, ಸಮಸ್ಯೆಗಳ ನೈಜ-ಸಮಯದ ಗುರುತಿಸುವಿಕೆ ಮತ್ತು ಅಂತರ-ಸಂಸ್ಥೆ ಸಮನ್ವಯವನ್ನು ಸಕ್ರಿಯಗೊಳಿಸಲು ಡಿಜಿಎಫ್‌ಟಿ ಒಳಗೆ ಆಂತರಿಕ ಸಮನ್ವಯ ಕಾರ್ಯವಿಧಾನವನ್ನು ಸಹ ಸ್ಥಾಪಿಸಲಾಗಿದೆ.

**<>><><*><><<>**

ಪಶ್ಚಿಮ ಏಷ್ಯಾದ ಕೆಲವು ಭಾಗಗಳಲ್ಲಿ ವಾಯುಪ್ರದೇಶದ ಪರಿಸ್ಥಿತಿ ಬದಲಾಗುತ್ತಿರುವುದರಿಂದ, ಭಾರತೀಯ ವಿಮಾನಯಾನ ಸಂಸ್ಥೆಗಳ ಒಂದು ಸಾವಿರದ ೨೦೦ ಕ್ಕೂ ಹೆಚ್ಚು ವಿಮಾನಗಳು ಮತ್ತು ವಿದೇಶಿ ವಿಮಾನ ಸಂಸ್ಥೆಗಳ ಸುಮಾರು ೩೮೦ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದ್ದು, ಸಿಲುಕಿಕೊಂಡಿರುವ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗುವಂತೆ ವಿಶೇಷ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಅಗತ್ಯವಿರುವಲ್ಲಿ ವಿಮಾನಯಾನ ಸಂಸ್ಥೆಗಳು ಹೆಚ್ಚುವರಿ ಸಾಮರ್ಥ್ಯವನ್ನು

ನಿಯೋಜಿಸುತ್ತಿವೆ ಎಂದು ಸಚಿವಾಲಯ ತಿಳಿಸಿದೆ. ಇಂಡಿಗೋದ ೨೦ ಹಾಗೂ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್‌ನ ೧೩ ವಿಮಾನಗಳು ಸೇರಿದಂತೆ ಭಾರತೀಯ ವಿಮಾನಯಾನ ಸಂಸ್ಥೆಗಳು ಇಂದು ೫೮ ವಿಮಾನಗಳನ್ನು ನಿರ್ವಹಿಸಲು ಯೋಜಿಸುತ್ತಿವೆ ಎಂದು ಸಚಿವಾಲಯ ಮಾಹಿತಿ ನೀಡಿದೆ. ಭಾರತೀಯ ವಿಮಾನಯಾನ ಸಂಸ್ಥೆಗಳು, ತಮ್ಮ ವೇಳಾಪಟ್ಟಿಗಳಲ್ಲಿ ಬದಲಾವಣೆಗಳನ್ನು ಮಾಡಿಕೊಂಡಿವೆ. ನಿರ್ಬಂಧಿತ ವಾಯುಪ್ರದೇಶವನ್ನು ತಪ್ಪಿಸುವ ಪರ್ಯಾಯ ಮಾರ್ಗಗಳ ಮೂಲಕ ದೀರ್ಘ ಮತ್ತು ಅತಿ ದೀರ್ಘ-ಪ್ರಯಾಣದ ಕಾರ್ಯಾಚರಣೆಗಳನ್ನು ಕ್ರಮೇಣ ಪುನರಾರಂಭಿಸಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ. ವಿಮಾನಯಾನ ಸಂಸ್ಥೆಗಳೊಂದಿಗೆ ಸಚಿವಾಲಯ ನಿರಂತರ ಸಂಪರ್ಕದಲ್ಲಿದ್ದು, ಈ ಅವಧಿಯಲ್ಲಿ ಟಿಕೆಟ್ ಬೆಲೆಗಳಲ್ಲಿ ಅನಗತ್ಯ ಏರಿಕೆಯಾಗದಂತೆ ಖಚಿತಪಡಿಸಿಕೊಳ್ಳಲು ವಿಮಾನ ದರಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಸಚಿವಾಲಯ ಭರವಸೆ ನೀಡಿದೆ. ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ಹೋಗುವ ಮೊದಲು ಆಯಾ ವಿಮಾನಯಾನ ಸಂಸ್ಥೆಗಳೊಂದಿಗೆ ಇತ್ತೀಚಿನ ವಿಮಾನ ಸ್ಥಿತಿಯನ್ನು ನೇರವಾಗಿ ಪರಿಶೀಲಿಸಲು ಮತ್ತು ಯಾವುದಾದರು ಬೆಳವಣಿಗಳ ಕುರಿತು ಅಧಿಕೃತ ಮೂಲಗಳಿಂದ ಮಾತ್ರ ಮಾಹಿತಿ ಪಡೆಯಲು ಸೂಚಿಸಲಾಗಿದೆ.

<>><><*><><<>

ಇರಾನ್ ಮೇಲಿನ ಅಮೆರಿಕ ಮತ್ತು ಇಸ್ರೇಲಿ ದಾಳಿಗಳಿಗೆ ಸ್ಪೇನ್ ಬೆಂಬಲ ನೀಡದಿರುವ ಹಾಗೂ ನ್ಯಾಟೊಗಾಗಿ ತನ್ನ ವೆಚ್ಚವನ್ನು ಹೆಚ್ಚಿಸಲು ಪ್ರತಿರೋಧ ವ್ಯಕ್ತಪಡಿಸಿರುವ ಕುರಿತು ಅಸಮಾಧಾನ ಹೊರಹಾಕಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಪೇನ್‌ನೊಂದಿಗಿನ ವ್ಯಾಪಾರವನ್ನು ಕೊನೆಗೊಳಿಸುವುದಾಗಿ ಬೆದರಿಕೆ ಹಾಕಿದ್ದಾರೆ. ವಿಶ್ವಸಂಸ್ಥೆಯ ಚಾರ್ಟರ್‌ನಲ್ಲಿ ಉಲ್ಲೇಖಿಸದೇ ಇರುವ ಯಾವುದೇ ರೀತಿಯ ದಾಳಿಗಳಲ್ಲಿ ದಕ್ಷಿಣ ಸ್ಪೇನ್‌ನಲ್ಲಿರುವ ನೆಲೆಗಳನ್ನು ಬಳಸಲು ತಮ್ಮ ದೇಶವು ಅಮೆರಿಕಕ್ಕೆ ಅವಕಾಶ ನೀಡುವುದಿಲ್ಲ ಎಂದು ಸ್ಪೇನ್ ವಿದೇಶಾಂಗ ಸಚಿವ ಜೋಸ್ ಮ್ಯಾನುಯೆಲ್ ಅಲ್ಬಾರೆಸ್ ಹೇಳಿದ ಒಂದು ದಿನದ ನಂತರ ಅಮೆರಿಕ ಅಧ್ಯಕ್ಷರು ಪ್ರತಿಕ್ರಿಯೆ ನೀಡಿದ್ದಾರೆ.

<>><><*><><<>

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ, ಅನಿಲ ಬೆಲೆಗಳು ಏರಿಕೆಯಾಗಿದ್ದು, ಮಧ್ಯಪ್ರಾಚ್ಯದಲ್ಲಿ ಸಂಘರ್ಷ ತೀವ್ರಗೊಂಡಂತೆ ಜಾಗತಿಕ ಷೇರು ಮಾರುಕಟ್ಟೆಗಳು ಕುಸಿದಿವೆ. ಯುಕೆ ಅನಿಲ ಬೆಲೆ ನಿನ್ನೆ ಮೂರು ವರ್ಷಗಳಲ್ಲಿ ಗರಿಷ್ಠ ಮಟ್ಟಕ್ಕೆ ಏರಿತು, ಬ್ರೆಂಟ್ ಕಚ್ಚಾ ತೈಲ ಮಾನದಂಡವು ಜುಲೈ ೨೦೨೪ ರ ನಂತರ ಮೊದಲ ಬಾರಿಗೆ ಬ್ಯಾರೆಲ್‌ಗೆ ೮೫ ಡಾಲರ್‌ಗಿಂತ ಸ್ವಲ್ಪ ಹೆಚ್ಚಳವಾಗಿದೆ. ಏತನ್ಮಧ್ಯೆ, ಅಮೆರಿಕ ಮತ್ತು ಐರೋಪ್ಯ ಷೇರು ಮಾರುಕಟ್ಟೆಗಳಲ್ಲಿನ ಕಂಪನಿಗಳ ಷೇರು ಬೆಲೆಗಳು ಕುಸಿದವು. ಜಾಗತಿಕ ಇಂಧನ ಸರಬರಾಜು ಮತ್ತು ಹಡಗು ಮಾರ್ಗಗಳಲ್ಲಿ ಪ್ರಮುಖ ಪಾತ್ರ ವಹಿಸುವ ಪ್ರದೇಶದಲ್ಲಿನ ಸಂಘರ್ಷವು ವ್ಯತಿರಿಕ್ತ ಪರಿಣಾಮ ಬೀರಬಹುದು ಎಂಬ ಆತಂಕಗಳಿವೆ. ಇದು ಇಂಧನ ವೆಚ್ಚವನ್ನು ಹೆಚ್ಚಿಸಿದ್ದು, ಪ್ರಪಂಚದಾದ್ಯಂತದ ವ್ಯವಹಾರಗಳು ಮತ್ತು ಗ್ರಾಹಕರಿಗೆ ಬೆಲೆ ಏರಿಕೆಗೆ ಕಾರಣವಾಯಿತು.

<>><><*><><<>

ಬಣ್ಣಗಳ ಹಬ್ಬವಾದ ಹೋಳಿಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ಈ ಹಬ್ಬವು ದುಷ್ಟತನದ ಮೇಲೆ ಒಳ್ಳೆಯದರ ವಿಜಯವನ್ನು ಹಾಗೂ ವಸಂತ ಋತುವಿನ ಆರಂಭವನ್ನು ಸೂಚಿಸುತ್ತದೆ. ಜಾತಿ, ಮತ, ಬಣ್ಣ, ವಯಸ್ಸು ಮತ್ತು ಲಿಂಗ ಭೇದವಿಲ್ಲದೆ ಸಮಾಜದ ಎಲ್ಲಾ ವರ್ಗಗಳು ಹೋಳಿಯನ್ನು ಬಹಳ ಉತ್ಸಾಹದಿಂದ ಆಚರಿಸುವುದರಿಂದ ಈ ಹಬ್ಬ ಸಮಾನತೆ ಮತ್ತು ಭ್ರಾತೃತ್ವದ ಸಂದೇಶವನ್ನೂ ನೀಡುತ್ತದೆ. ಈ ದಿನದಂದು, ಜನರು ಪರಸ್ಪರ ಬಣ್ಣಗಳನ್ನು ಹಚ್ಚಿ, ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುವ ಜೊತೆಗೆ ಸಿಹಿತಿಂಡಿಗಳನ್ನು ಸವಿಯುತ್ತಾರೆ.

<>><><*><><<>

ಹೋಳಿ ಹಬ್ಬದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ. ಹೋಳಿ ಹಬ್ಬವು ಸಾಮಾಜಿಕ ಸಾಮರಸ್ಯದ ಸಂದೇಶವನ್ನು ನೀಡುವ ಹಬ್ಬವಾಗಿದೆ. ಈ ಹಬ್ಬವು ಸಮಾಜದಲ್ಲಿ ಪ್ರೀತಿ ಮತ್ತು ಭರವಸೆಯನ್ನು ಪಸರಿಸುತ್ತದೆ ಹಾಗೂ ಸಾಮಾಜಿಕ ಒಗ್ಗಟ್ಟಿನ ಮನೋಭಾವವನ್ನು ಬಲಪಡಿಸುತ್ತದೆ. ಇದು ವೈವಿಧ್ಯತೆಯಲ್ಲಿ ಏಕತೆಯ ಸಂಕೇತವಾಗಿದೆ ಎಂದು ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ತಿಳಿಸಿದ್ದಾರೆ. ಹೋಳಿ ಹಬ್ಬದ ಶುಭಾಶಯ ಕೋರಿರುವ ಲೋಕಸಭಾಧ್ಯಕ್ಷ ಓಂ ಬಿರ್ಲಾ, ಈ ಹಬ್ಬ ಬಣ್ಣಗಳು, ಉತ್ಸಾಹ ಮತ್ತು ಪರಸ್ಪರ ಸಾಮರಸ್ಯದ ಆಚರಣೆ ಎಂದು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಈ ಹಬ್ಬವು ಭಾರತದ ಶ್ರೀಮಂತ ಸಂಸ್ಕೃತಿ, ಸಂಪ್ರದಾಯಗಳು ಮತ್ತು ಸಹೋದರತ್ವದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಸ ಅವರು ಹೇಳಿದರು.

<>><><*><><<>

ಬರ್ಮಿಂಗ್ಹ್ಯಾಮ್‌ನಲ್ಲಿ ನಿನ್ನೆ ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ಗೆ ಚಾಲನೆ ದೊರೆತಿದೆ. ನಿನ್ನೆ ನಡೆದ ಪುರುಷರ ಸಿಂಗಲ್ಸ್‌ನ ಆರಂಭಿಕ ಸುತ್ತಿನಲ್ಲಿ ಭಾರತದ ಲಕ್ಷ್ಯ ಸೇನ್ ವಿಶ್ವದ ಅಗ್ರ ಶ್ರೇಯಾಂಕಿತ ಮತ್ತು ಹಾಲಿ ಚಾಂಪಿಯನ್ ಚೀನಾದ ಶಿ ಯುಕಿ ಅವರನ್ನು ೨೩-೨೧, ೧೯-೨೧, ೨೧-೧೭ ಸೆಟ್‌ಗಳಿಂದ ಸೋಲಿಸಿದರು.

ಭಾರತದ ಅಗ್ರ ಮಿಶ್ರ ಡಬಲ್ಸ್ ಜೋಡಿಯಾದ ತನಿಶಾ ಕ್ರಾಸ್ಟೊ ಮತ್ತು ಧ್ರುವ್ ಕಪಿಲಾ, ಕೂಡ ಎರಡನೇ ಸುತ್ತಿಗೆ ಮುನ್ನಡೆದರು, ಅವರು ಮಲೇಷ್ಯಾದ ಹೂ ಪಾಂಗ್ ರಾನ್ ಮತ್ತು ಚೆಂಗ್ ಸು ಯಿನ್ ಅವರನ್ನು ೨೧-೧೭, ೨೧-೧೯ ಅಂತರದಲ್ಲಿ ಮಣಿಸಿದರು. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿವಿ ಸಿಂಧು ಈ ಪಂದ್ಯಾವಳಿಯಲ್ಲಿ ಭಾಗವಹಿಸಲು ಸಾಧ್ಯವಾಗಿಲ್ಲ.

<>><><*><><<>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ೨೦ ವಿಶ್ವಕಪ್‌ನ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಹಾಗೂ ನ್ಯೂಜಿಲೆಂಡ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ ತಂಡ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಈ ಎರಡೂ ಪಂದ್ಯಗಳ ವಿಜೇತರು ಮಾರ್ಚ್ ೮ ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಫೈನಲ್‌ನಲ್ಲಿ ಪರಸ್ಪರ ಮುಖಾಮುಖಿಯಾಗಲಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**